ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಸಂಸತ್ತು

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ    ದಿನಾಂಕ DATE: 21/07/2020

# ರಾಜ್ಯಸಭೆಯ ಬಾವಿಗೆ ಇಳಿಯುವವರಿಗೆ ಮತ ಹಕ್ಕು ಬೇಡ: ಶಿಫಾರಸು

## ರಾಜ್ಯಸಭೆಗೆ ನಿಯಮ ಪರಿಶೀಲನೆ ಸಮಿತಿ ಶಿಫಾರಸು

ನವದೆಹಲಿ: ಸದನದ ಬಾವಿಗೆ ಇಳಿದು ಪ್ರತಿಭಟನೆ ನಡೆಸುವ ರಾಜ್ಯಸಭಾ ಸದಸ್ಯರಿಗೆ ಮಸೂದೆಗಳಿಗೆ ಸಂಬಂಧಿಸಿದ ಮತದಾನ ಪ್ರಕ್ರಿಯೆ ವೇಳೆ ಮತ ಹಾಕುವುದರಿಂದ ನಿರ್ಬಂಧ ಹೇರಬೇಕು ಎಂದು ಸದನದನಿಯಮಗಳಪರಿಶೀಲನೆಗೆನೇಮಕಗೊಂಡಿದ್ದ ಸಮಿತಿಯೊಂದು ಶಿಫಾರಸು ಮಾಡಿದೆ.

ಇದೇ ವೇಳೆ, ರಾಜ್ಯಸಭೆಯ ನಿಯಮ 267ರಡಿ ಕೇವಲ ಅರ್ಧ ತಾಸು ಚರ್ಚೆಗಷ್ಟೇ ಅವಕಾಶ ಕಲ್ಪಿಸಬೇಕು ಎಂದೂ ಸಲಹೆ ಮಾಡಿದೆ. ನಿಯಮ 267ರಡಿ ಎಲ್ಲ ಕಲಾಪಗಳನ್ನೂ ಬದಿಗೊತ್ತಿ, ನಿರ್ದಿಷ್ಟ ವಿಷಯಗಳ ಕುರಿತು ಚರ್ಚೆಗೆ ಅವಕಾಶವಿದೆ. ಹೀಗಾಗಿ ಈ ನಿಯಮ ರಾಜ್ಯಸಭೆಯ ಪ್ರತಿಪಕ್ಷಗಳಿಗೆ ಅಚ್ಚುಮೆಚ್ಚಿನದ್ದಾಗಿದೆ.

ಕಲಾಪದ ಸಂದರ್ಭ ಸದಸ್ಯರು ಬಾವಿಗೆ ಇಳಿದು ಪ್ರತಿಭಟನೆ ನಡೆಸಿದರೆ ಅವರನ್ನು ಅಮಾನತುಗೊಳಿಸುವ ಅಧಿಕಾರ ಲೋಕಸಭೆಯಲ್ಲಿ ಸ್ಪೀಕರ್ ಅವರಿಗೆ ಇದೆ. ಆದರೆ ರಾಜ್ಯಸಭೆಯಲ್ಲಿ ಸಭಾಪತಿಗಳಿಗೆಆಅಧಿಕಾರಇಲ್ಲ. ಹೀಗಾಗಿನಿಯಮ ತಿದ್ದುಪಡಿಗಾಗಿರಾಜ್ಯಸಭೆಯಮಾಜಿಮಹಾಪ್ರಧಾನ ಕಾರ್ಯದರ್ಶಿ ವಿ.ಕೆ. ಅಗ್ನಿಹೋತ್ರಿ, ಕಾನೂನು ಸಚಿವಾಲಯದ ಮಾಜಿ ಹೆಚ್ಚುವರಿ ಕಾರ್ಯದರ್ಶಿ ದಿನೇಶ್‌ಭಾರದ್ವಾಜ್‌ಅವರಸಮಿತಿಯನ್ನುಸಭಾಪತಿ ವೆಂಕಯ್ಯ ನಾಯ್ಡು ರಚಿಸಿದ್ದರು. 51 ಸಭೆಗಳನ್ನು ನಡೆಸಿ ಆ ಸಮಿತಿ ಕೆಲವೊಂದು ಶಿಫಾರಸುಗಳನ್ನು ಮಾಡಿದೆ.



ಆದರೆ ಸದನದ ಬಾವಿಗೆ ಇಳಿದವರ ಮತ ಹಕ್ಕು ಕಸಿಯುವುದುಪ್ರಜಾಸತ್ತೆವಿರೋಧಿ, ಅಪ್ರಾಯೋಗಿಕ ಎಂದು ಮಾಜಿ ಸಂಸದೀಯ ಕಾರ್ಯದರ್ಶಿ ಅಫ್ಜಲ್ ಅಮಾನುಲ್ಲಾ ತಿಳಿಸಿದ್ದರೆ, ಈ ವಿಷಯ ಚರ್ಚೆಗೆ ಬಂದಾಗ, ನಿಲುವು ತೆಗೆದುಕೊಳ್ಳುತ್ತೇವೆ ಎಂದು ಕಾಂಗ್ರೆಸ್ಸೇತರಪಕ್ಷದನಾಯಕರೊಬ್ಬರುತಿಳಿಸಿದ್ದಾರೆ.